# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 12 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12.09.2022 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾಮಾನ್ಯವಾಗಿ ಸ್ಥಳೀಯ ಕುಚ್ಚುಲಕ್ಕಿಯನ್ನು ಊಟಕ್ಕೆ ಬಳಸುತ್ತಿದ್ದು, ಆ ಪ್ರದೇಶದ ಶಾಲಾ ಮಕ್ಕಳಿಗೆ ಬಿಸಿಯೂಟಕ್ಕೆ ಕುಚ್ಚುಲಕ್ಕಿಯನ್ನು ಉಪಯೋಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು) | ಉಡುಪಿ ಜಿಲ್ಲೆಯ ಮಧ್ಯಾಹ್ನ ಉಪಹಾರ ಯೋಜನೆಯ ಶಿಕ್ಷಣಾಧಿಕಾರಿಗಳಿಂದ 2022-23ನೇ ಸಾಲಿನಲ್ಲಿ ಕುಚ್ಚುಲಕ್ಕಿಯನ್ನು ಮಧ್ಯಾಹ್ನ ಉಪಹಾರ ಯೋಜನೆಯಡಿ ಸರಬರಾಜು ಮಾಡುವ ಬಗ್ಗೆ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಭಾರತೀಯ ಆಹಾರ ನಿಗಮಕ್ಕೆ ಯಾವುದೇ ಪ್ರಸ್ತಾವನೆ ಸಲ್ಲಿಕೆಯಾಗಿರುವುದಿಲ್ಲ.<br>ದಕ್ಷಿಣ ಕನ್ನಡ ಜಿಲ್ಲೆಯ ಮಧ್ಯಾಹ್ನ ಉಪಹಾರ ಯೋಜನೆಯ ಶಿಕ್ಷಣಾಧಿಕಾರಿಗಳಿಂದ 2022-23ನೇ ಸಾಲಿನಲ್ಲಿ ಕುಚ್ಚುಲಕ್ಕಿಯನ್ನು ಮಧ್ಯಾಹ್ನ ಉಪಹಾರ ಯೋಜನೆಯಡಿ ಸರಬರಾಜು ಮಾಡಲು ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಭಾರತೀಯ ಆಹಾರ ನಿಗಮಕ್ಕೆ ಪ್ರಸ್ತಾವನೆ ಸಲ್ಲಿಕೆಯಾಗಿದ್ದ ಕಾರಣ ದಕ್ಷಿಣ ಕನ್ನಡ ಜಿಲ್ಲೆಗೆ ಭಾರತೀಯ ಆಹಾರ ನಿಗಮದಿಂದ ಕುಚ್ಚುಲಕ್ಕಿಯನ್ನು ಮಧ್ಯಾಹ್ನ ಉಪಹಾರ ಯೋಜನೆಯಡಿ ಸರಬರಾಜು ಮಾಡಲಾಗಿರುತ್ತದೆ. |
| ಆ) | ಶಾಲಾ ಮಕ್ಕಳಿಗೆ ಸದರಿ ಕುಚ್ಚುಲಕ್ಕಿಯನ್ನು ನೀಡುವ ಪ್ರಸ್ತಾವನೆಯನ್ನು ಸರ್ಕಾರ ಪುರಸ್ಕರಿಸದಿರಲು ಕಾರಣವೇನು; | 2022-23ನೇ ಸಾಲಿನಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯಡಿ ಕುಚ್ಚುಲಕ್ಕಿಯನ್ನು ಸರಬರಾಜು ಮಾಡುವಂತೆ ಕೋರಿ ಸಂಬಂಧಿಸಿದ ಜಿಲ್ಲೆಗಳಿಂದ ಸಲ್ಲಿಕೆಯಾಗಿದ್ದ ಪ್ರಸ್ತಾವನೆಗಳನ್ನು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಭಾರತೀಯ ಆಹಾರ ನಿಗಮದಿಂದ ಪುರಸ್ಕರಿಸಲಾಗಿದೆ. |
| ಇ) | ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಲಾ ಮಕ್ಕಳಿಗೆ ಕುಚ್ಚುಲಕ್ಕಿಯನ್ನು ನೀಡಲು ಇನ್ನೂ ಎಷ್ಟು ಸಮಯ ಬೇಕಾಗಬಹುದು? (ಸಂಪೂರ್ಣ ವಿವರ ನೀಡುವುದು) | ಉಡುಪಿ ಜಿಲ್ಲೆಯಿಂದ ಕುಚ್ಚುಲಕ್ಕಿಯನ್ನು ಮಧ್ಯಾಹ್ನ ಉಪಹಾರ ಯೋಜನೆಯಡಿ ಸರಬರಾಜು ಮಾಡುವ ಸಂಬಂಧ ಯಾವುದೇ ಪ್ರಸ್ತಾವನೆ ಸಲ್ಲಿಕೆಯಾಗಿರುವುದಿಲ್ಲ.<br>ದಕ್ಷಿಣ ಕನ್ನಡ ಜಿಲ್ಲೆಯಿಂದ ಕುಚ್ಚುಲಕ್ಕಿಯನ್ನು ಮಧ್ಯಾಹ್ನ ಉಪಹಾರ ಯೋಜನೆಯಡಿ ಸರಬರಾಜು ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಕೆಯಾಗಿದ್ದ ಕಾರಣ ಭಾರತೀಯ ಆಹಾರ ನಿಗಮದಿಂದ ಈಗಾಗಲೇ ಕುಚ್ಚುಲಕ್ಕಿಯನ್ನು ದಕ್ಷಿಣ ಕನ್ನಡ ಜಿಲ್ಲೆಗೆ ಸರಬರಾಜು ಮಾಡಲಾಗಿದೆ. |

ಇಪಿ 51 ಎಂಎಂಎಸ್ 2022

(ಬಿ.ಸಿ ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ
ಸಕಾಲ ಸಚಿವರು.